# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಭಾರತ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯಡಿ ಆರ್ಥಿಕ ನೆರವು ಪಡೆಯಲು ಅರ್ಹರಾಗಿರುವ ಎಲ್ಲಾ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ. 4,000/-ಗಳನ್ನು ಎರಡು ಸಮಾನ ಕಂತುಗಳಲ್ಲಿ (ರೂ. 2000/- ಪ್ರತಿ ಕಂತು) ನೇರ ನಗದು ವರ್ಗಾವಣೆ ಮುಖಾಂತರ ನೆರವು ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಕೃಇ 09 ಕೃಉಇ 2019, ದಿನಾಂಕ:17.08.2019
2) ಸರ್ಕಾರದ ಆದೇಶ ಸಂಖ್ಯೆ:ಆಇ 03 ಬಿಸಿಎಫ್ 2019, ದಿ:13.08.2019.
3) 2019-20ನೇ ಸಾಲಿನ ಆಯವ್ಯಯ ಪೂರಕ ಅಂದಾಜು-2 ಮತ್ತು ಆರ್ಥಿಕ ಇಲಾಖೆಯ ಅ.ಟಿ ಸಂಖ್ಯೆ:ಆಇ 588 ವೆಚ್ಚ-4/2019, ದಿ:30.09.2019..
4) ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಕೃನಿ(ವಿ.ತ.) /ಪಿ.ಎಂ.ಕೆ-ಕ/ 150/2019-20, ದಿನಾಂಕ: 13.11.2019

******

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ:01ರಲ್ಲಿನ ಸರ್ಕಾರದ ಆದೇಶದಲ್ಲಿ ಭಾರತ ಸರ್ಕಾರದ PM-KISAN ಯೋಜನೆಯಡಿ ನೆರವು ಪಡೆಯಲು ಅರ್ಹರಿರುವ ರಾಜ್ಯದ ಎಲ್ಲಾ ರೈತರಿಗೆ ಉತ್ತಮ ಕೃಷಿ ಪರಿಕರಗಳನ್ನು ಬಳಸಲು ನೆರವಾಗಲು ಹೆಚ್ಚುವರಿಯಾಗಿ ರಾಜ್ಯ ಸರ್ಕಾರದಿಂದ ರೂ.4,000/-ಗಳನ್ನು ಎರಡು ಸಮಾನ ಕಂತುಗಳಲ್ಲಿ (ರೂ.2000/- ಪ್ರತಿ ಕಂತು) ನೇರ ನಗದು ವರ್ಗಾವಣೆ ಮುಖಾಂತರ ಆರ್ಥಿಕ ನೆರವು ನೀಡಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ. ಸದರಿ ಯೋಜನೆಗೆ ತಗಲುವ ವೆಚ್ಚವನ್ನು ಸಾದ್ವಿಲಾರು ನಿಧಿಯಿಂದ ಭರಿಸತಕ್ಕದ್ದೆಂದು ನಂತರ 2019-20ನೇ ಸಾಲಿನ ಪೂರಕ ಅಂದಾಜು-2ರಲ್ಲಿ ಆಯವ್ಯಯ ಲೆಕ್ಕ ಶೀರ್ಷಿಕೆ:2401-00-800-1-05ರ ಉಪ ಶೀರ್ಷಿಕೆ:100ರಡಿ ಒದಗಿಸಲಾಗುವ ಅನುದಾನದಿಂದ ಸಾದಿಲ್ವಾರು ನಿಧಿಗೆ ಮರುಭರಣ ಮಾಡತಕ್ಕದ್ದು ಎಂದು ಸಹ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:2 ರ ಆರ್ಥಿಕ ಇಲಾಖೆಯ ಆದೇಶದಲ್ಲಿ ಭಾರತ ಸರ್ಕಾರವು ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಮಾರ್ಗಸೂಚಿಯನ್ವಯ ಆರ್ಹ ರೈತರಿಗೆ ರಾಜ್ಯ ಸರ್ಕಾರದಿಂದಲೂ ರೂ.2000ರಂತೆ 2 ಕಂತಿನಲ್ಲಿ ರೂ.4000/-ಗಳನ್ನು ವಾರ್ಷಿಕವಾಗಿ ಧನ ಸಹಾಯ ನೀಡಲು ರೂ.1000/-ಕೋಟಿಗಳನ್ನು ಸಾದಿಲ್ವಾರು ನಿಧಿಯಿಂದ ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:03ರ ಆರ್ಥಿಕ ಇಲಾಖೆಯ ಪತ್ರದಲ್ಲಿ ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿಎಂ-ಕಿಸಾನ್) ಯೋಜನೆಯನ್ನು ಅನುಷ್ಠಾನಗೊಳಿಸಲು ಒಟ್ಟಾರೆಯಾಗಿ ರೂ.1500.00/-ಕೋಟಿಗಳನ್ನು ಲೆಕ್ಕ ಶೀರ್ಷಿಕೆ 2401-00-800-1-05-100ರಡಿ ಪೂರಕ ಅಂದಾಜು -2ರಲ್ಲಿ ಹೆಚ್ಚುವರಿಯಾಗಿ ಒದಗಿಸಲಾಗಿದೆ ಎಂದು ಹಾಗೂ ಸದರಿ ಅನುದಾನದಲ್ಲಿ ಸಾದಿಲ್ವಾರು ನಿಧಿಯಿಂದ ಬಿಡುಗಡೆ ಮಾಡಲಾಗಿದ್ದ ರೂ.1000/-ಕೋಟಿಗಳ ಅನುದಾನದಲ್ಲಿ ರೂ.489.14 ಕೋಟಿಗಳು ಮಾತ್ರ ವೆಚ್ಚವಾಗಿರುವುದರಿಂದ ಸದರಿ ಅನುದಾನವನ್ನು ಸಾದಿಲ್ವಾರು ನಿಧಿಗೆ ಮರುಭರಣ ಮಾಡಿದ್ದು ಉಳಿದಂತೆ ಹೆಚ್ಚುವರಿಯಾಗಿ ಒದಗಿಸಿರುವ ರೂ.1010.86/- ಕೋಟಿಗಳ ಅನುದಾನದಿಂದ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:04 ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2019-20ನೇ ಸಾಲಿನ ಪೂರಕ ಅಂದಾಜು -2ರಲ್ಲಿ ನೂತನ ಲೆಕ್ಕ ಶೀರ್ಷಿಕೆ 2401-00-800-1-05-100ರಡಿ ಒದಗಿಸಿರುವ ರೂ.1010.86 ಕೋಟಿಗಳ ಅನುದಾನವನ್ನು ರಾಜ್ಯ ಸರ್ಕಾರದಿಂದ ಅರ್ಹ ರೈತರಿಗೆ ಸಹಾಯಧನ ನೀಡಲು ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 9 ಕೃಉಇ 2019,ಬೆಂಗಳೂರು, ದಿನಾಂಕ: 14.11.2019.**

ಭಾರತ ಸರ್ಕಾರದ PM-KISAN ಯೋಜನೆಯಡಿ ಅರ್ಹರಿರುವ ಎಲ್ಲಾ ರೈತರಿಗೆ ಉತ್ತಮ ಕೃಷಿ ಪರಿಕರಗಳನ್ನು ಬಳಸಲು ನೆರವಾಗಲು ಹೆಚ್ಚುವರಿಯಾಗಿ ರಾಜ್ಯ ಸರ್ಕಾರದಿಂದ ರೂ.4,000/-ಗಳನ್ನು ಎರಡು ಸಮಾನ ಕಂತುಗಳಲ್ಲಿ (ರೂ.2000/- ಪ್ರತಿ ಕಂತು) ನೇರ ನಗದು ವರ್ಗಾವಣೆ ಮುಖಾಂತರ ಆರ್ಥಿಕ ನೆರವು ನೀಡಲು 2019-20ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2401-00-800-1-05-100 ರಡಿ ಹೆಚ್ಚುವರಿಯಾಗಿ ಒದಗಿಸಿರುವ ರೂ.1010.86 ಕೋಟಿಗಳನ್ನು (ಒಂದು ಸಾವಿರದ ಹತ್ತು ಕೋಟಿ ಎಂಬತ್ತಾರು ಲಕ್ಷಗಳು ಮಾತ್ರ) ಈ ಮೂಲಕ ಬಿಡುಗಡೆ ಮಾಡಲಾಗಿದೆ.

ಕೃಷಿ ನಿರ್ದೇಶಕರು, ಈ ಯೋಜನೆಯ DDO ಆಗಿರುವುದರಿಂದ, ಅವರಿಗೆ ನೀಡಲಾದ DDO ಕೋಡ್ ನ್ನು ಬಳಸಿ ಹಣ ಸೆಳೆಯತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 588 ವೆಚ್ಚ-4/2019, ದಿ:30.09.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಇವರು ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರೊಂದಿಗೆ ಚರ್ಚಿಸಿ ಅನುಮತಿಸಿರುವಂತೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

BS Nagarathnam

**(ಬಿ.ಎಸ್. ನಾಗರತ್ನಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

14/11

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ,
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ. ಬೆಂಗಳೂರು.
12. ಆಯುಕ್ತರು, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು.
13. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
14. ಆಯುಕ್ತರು/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಆಯುಕ್ತರು/ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
16. ಡೆಪ್ಯುಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಆಫೀಸರ್, ಬೆಂಗಳೂರು.
17. ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಸದಸ್ಯರು, ಬೆಂಗಳೂರು.
18. ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್, ಬೆಂಗಳೂರು.
19. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
20. ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು.
21. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
22. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
23. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
24. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
25. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
26. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ:16 ರಿಂದ 20 ರವರೆಗೆ ಕೃಷಿ ಆಯುಕ್ತರ ಮುಖಾಂತರ ಹೊರಡಿಸುವುದು)

******